ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ

ದಿನಾಂಕ : DATE : 5/12/20..

# ಬಂದ್‌ನಿಂದ ಆರ್ಥಿಕ ನಷ್ಟವಾದರೆ ಆಯೋಜಕರೇ ಹೊಣೆ: ಹೈಕೋರ್ಟ್

## 'ಕೋವಿಡ್ ಮಾರ್ಗಸೂಚಿ ಉಲ್ಲಂಘಿಸಿದರೆ ದಂಡ ವಿಧಿಸಿ'

• ಕನ್ನಡಪ್ರಭ ವಾರ್ತೆ ಬೆಂಗಳೂರು

ಕರ್ನಾಟಕ ಬಂದ್ ವೇಳೆ ಬೀದಿ ಬದಿ ವ್ಯಾಪಾರಿಗಳಿಗೆ ಆಗುವ ನಷ್ಟ ಸೇರಿದಂತೆ ಆಗುವ ಆರ್ಥಿಕ ನಷ್ಟಕ್ಕೆ ಆಯೋಜಕರೇ ಹೊಣೆಯಾಗಿರುತ್ತಾರೆಂದು ಹೈಕೋರ್ಟ್ ಶುಕ್ರವಾರ ಸ್ಪಷ್ಟಪಡಿಸಿದೆ.

ರಾಜ್ಯದಲ್ಲಿ ಕೋವಿಡ್-19 ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಜಾರಿ ಮಾಡಲು ಸರ್ಕಾರಕ್ಕೆ ನಿರ್ದೇಶಿಸಲು ಕೋರಿ ಲೆಟ್ಜ್ ಕಿಟ್ಜ್ ಫೌಂಡೇಶನ್ ಮತ್ತು ಸಾಮಾಜಿಕ ಕಾರ್ಯಕರ್ತ ಸಾಯಿದತ್ತಾ ಸಲ್ಲಿಸಿದ್ದ ಅರ್ಜಿಗಳ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ಎ.ಎಸ್.ಓಕ ಅವರ ನೇತೃತ್ವದ ವಿಭಾಗೀಯ ಈ ಸ್ಪಷ್ಟನೆ ನೀಡಿದೆ.

ರಾಜಕೀಯ ಪಕ್ಷಗಳ ಕಾರ್ಯಕ್ರಮ ಹಾಗೂ ರ‍್ಯಾಲಿಗಳಲ್ಲಿ ಆಗುತ್ತಿರುವ ಕೋವಿಡ್-ಮಾರ್ಗಸೂಚಿಗಳಉಲ್ಲಂಘನೆಯನ್ನು ತಡೆಯಲು ಸರ್ಕಾರಕ್ಕೆ ನಿರ್ದೇಶಿಸುವಂತೆ ಕೋರಿ ಸಲ್ಲಿಸಿದ್ದ ಅರ್ಜಿಗಳಲ್ಲಿ ವಾಟಾಳ್ ಪಕ್ಷ ಸೇರಿದಂತೆ ರಾಜ್ಯದಲ್ಲಿ ಮಾನ್ಯತೆ ಪಡೆದಿರುವ ಇತರೆ ಅನೇಕ ರಾಜಕೀಯ ಪಕ್ಷಗಳು ಪ್ರತಿವಾದಿಯಾಗಿವೆ.

ವಿಚಾರಣೆ ವೇಳೆ ಅರ್ಜಿದಾರರ ಪರ ವಕೀಲರು, ಶನಿವಾರ ಕರ್ನಾಟಕ ಬಂದ್‌ಗೆ ಕರೆ ನೀಡಿರುವ ವಿಚಾರವನ್ನು ನ್ಯಾಯಾಲಯದ ಗಮನಕ್ಕೆ ತಂದು, ಬಂದ್‌ನಿಂದ ಸರ್ಕಾರದ ಖಜಾನೆಗೆ ಆರ್ಥಿಕ ನಷ್ಟ



ಉಂಟಾಗುವ ಮತ್ತು ಕೋವಿಡ್ ಮಾರ್ಗಸೂಚಿಗಳು ಉಲ್ಲಂಘನೆಯಾಗುವ ಸಾಧ್ಯತೆಯಿದೆ ಎಂದು ತಿಳಿಸಿದರು.

ಅದಕ್ಕೆ ಪ್ರತಿಕ್ರಿಯಿಸಿದ ನ್ಯಾಯಪೀಠ, ಸುಪ್ರೀಂ ಕೋರ್ಟ್ ಆದೇಶ ಪ್ರಕಾರ ಬಂದ್ ವೇಳೆ ಉಂಟಾಗುವ ಆರ್ಥಿಕ ನಷ್ಟಕ್ಕೆ ಆಯೋಜಕರೇ ಹೊಣೆಯಾಗಿರುತ್ತಾರೆ. ಬೀದಿ ಬದಿ ವ್ಯಾಪಾರಿಗಳಿಗಾಗುವ ನಷ್ಟಕ್ಕೂ ಅವರೇ ಹೊಣೆ ಎಂದು ಸ್ಪಷ್ಟಪಡಿಸಿತು.

ಅಲ್ಲದೇ, ಬಂದ್ ವೇಳೆ ಕೋವಿಡ್ ಮಾರ್ಗಸೂಚಿ ಉಲ್ಲಂಘನೆಯಾಗದಂತೆ ಸರ್ಕಾರ ಕಠಿಣ ಕ್ರಮ ಕೈಗೊಳ್ಳಬೇಕು. ಒಂದೊಮ್ಮೆ ಮಾರ್ಗಸೂಚಿ ಉಲ್ಲಂಘಿಸಿದರೆ, ತಪ್ಪಿತಸ್ಥರಿಂದ ಪೊಲೀಸರು ದಂಡ ಸಂಗ್ರಹಿಸಬೇಕು. ಈ ನಿರ್ದೇಶನಗಳ ಪಾಲಿಸಿದ ಬಗ್ಗೆ ವರದಿಯನ್ನು ಡಿ.17ಕ್ಕೆ ಸಲ್ಲಿಸಬೇಕು ಎಂದು ಸರ್ಕಾರಕ್ಕೆ ನಿರ್ದೇಶಿಸಿದ ಹೈಕೋರ್ಟ್, ವಾಟಾಳ್ ಪಕ್ಷ ಸೇರಿದಂತೆ ಇತರೆ ರಾಜಕೀಯ ಪಕ್ಷಗಳಿಗೆ ನೋಟಿಸ್ ಜಾರಿ ಮಾಡಿ ವಿಚಾರಣೆ ಮುಂದೂಡಿತು.

### ಒತ್ತಾಯಪೂರ್ವಕ ಬಂದ್ ಮಾಡಿದರೆ ಕ್ರಮ: ಬೊಮ್ಮಾಯಿ

ಕಾರವಾರ: ರಾಜ್ಯದಲ್ಲಿ ಶನಿವಾರ ಒತ್ತಾಯಪೂರ್ವಕ ಬಂದ್ ಮಾಡಿದರೆ ಕಾನೂನು ಕ್ರಮ ತೆಗೆದುಕೊಳ್ಳುವುದಾಗಿ ಗೃಹಸಚಿವ ಬಸವರಾಜ ಬೊಮ್ಮಾಯಿ ಖಡಕ್ ಎಚ್ಚರಿಕೆ ನೀಡಿದ್ದಾರೆ. ನಗರಕ್ಕೆ ಶುಕ್ರವಾರ ಆಗಮಿಸಿದ್ದ ವೇಳೆ ಮಾಧ್ಯಮದವರ ಜತೆಗೆ ಮಾತನಾಡಿ, ಕಾನೂನು ಸುವ್ಯವಸ್ಥೆ ದೃಷ್ಟಿಯಿಂದ ರಾಜ್ಯಾದ್ಯಂತ ಪೊಲೀಸ್ ಬಿಗಿ ಬಂದೋಬಸ್ತ್ ಮಾಡಲು ಕ್ರಮ ಕೈಗೊಂಡಿದ್ದು, ಒತ್ತಾಯಪೂರ್ವಕವಾಗಿ ಮಾಡುವಂತಿಲ್ಲ. ಸರ್ಕಾರಿ ಕಚೇರಿಗಳು, ಸಾರಿಗೆ ಎಂದಿನಂತೆ ಇರುತ್ತದೆ ಎಂದು ಸ್ಪಷ್ಟಪಡಿಸಿದ ಅವರು, ಬಂದ್ ಮಾಡುವುದರಿಂದ ವ್ಯಾಪಾರ ವಹಿವಾಟು ನಿಲ್ಲುತ್ತದೆ. ಜನಜೀವನಕ್ಕೆ ತೊಂದರೆ ಆಗುತ್ತದೆ. ಬಂದ್‌ಗೆ ಕರೆ ನೀಡಿದ ಸಂಘಟನೆಗಳು ಬಂದ್ ಕೈಬಿಡಿ ಎಂದು ಮನವಿ ಮಾಡಿದರು.